# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : 117(90) |
| ಮಾನ್ಯ ಸದಸ್ಯರ ಹೆಸರು: | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು: | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 15.07.2024. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮೀಣ ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿರುವ ಅನೇಕ ಪ್ರಾಥಮಿಕ ಶಾಲೆಗಳಿಗೆ ಡಿ-ಇಡಿ (ಪ್ರಾಥಮಿಕ ಶಾಲಾ ಶಿಕ್ಷಣ) ತರಬೇತಿ ಹೊಂದಿರುವ ಅತಿಥಿ ಶಿಕ್ಷಕರ ಕೊರತೆ ಇರುವಾಗ ಮತ್ತು ಓಡಾಡಲು ವಾಹನದ ವ್ಯವಸ್ಥೆ ಇಲ್ಲದ ದೂರದ ಹಳ್ಳಿಗಳಲ್ಲಿರುವ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ತರಬೇತಿ ಆಗಿರದ ಸ್ಥಳೀಯರಾಗಿರುವ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಪದವೀಧರರಿಗೆ ಇಂತಹ ಶಾಲೆಗಳಲ್ಲಿ ತರಗತಿಗಳನ್ನು ನಡೆಸಲು ಅವಕಾಶವಿದೆಯೇ: | ಇಂತಹ ನಿರ್ದಿಷ್ಟ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ.<br><br>1 ರಿಂದ 5ನೇ ತರಗತಿವರೆಗಿನ ಶಿಕ್ಷಣ ವ್ಯವಸ್ಥೆಯು ವಿದ್ಯಾರ್ಥಿಗಳಿಗೆ ಭದ್ರ ಬುನಾದಿಯಾಗಿದ್ದು, ತರಬೇತಿ ರಹಿತ ಶಿಕ್ಷಕರಿಗಿಂತ ತರಬೇತಿ ಹೊಂದಿದ ಶಿಕ್ಷಕರಿಂದ (ಡಿಇಡಿ) ಬೋಧನೆ ಮಾಡುವುದು ಸೂಕ್ತವೆಂದು ಭಾವಿಸಲಾಗಿದೆ. ಆದ್ದರಿಂದ, ತರಬೇತಿ ರಹಿತ ಇತರ ಪದವೀಧರ ಅಭ್ಯರ್ಥಿಗಳಿಂದ ತರಗತಿ ನಡೆಸಲು ಅವಕಾಶವಿರುವುದಿಲ್ಲ. |
| ಆ) | ಇಲ್ಲದಿದ್ದಲ್ಲಿ, ಗ್ರಾಮೀಣ ಮತ್ತು ಹಳ್ಳಿ ಪ್ರದೇಶಗಳಲ್ಲಿರುವ ಕಿರಿಯ ಪ್ರಾಥಮಿಕ ಶಾಲೆಗಳಿಗೆ ಡಿ-ಇಡಿ ತರಬೇತಿ ಆಗಿರುವ ಅತಿಥಿ ಶಿಕ್ಷಕರ ಕೊರತೆ ಇದ್ದಲ್ಲಿ, ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು? | ಉದ್ಭವಿಸುವುದಿಲ್ಲ. |

**ಇಪಿ 45 ಪಿಎಂಎ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು